/178449/2021

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ ಹಿಪ್ಪರಗಿ ಬ್ಯಾರೇಜಿನ ಎಡಭಾಗದ ತಿರುವಿನಲ್ಲಿ ಕಾಂಕ್ರೀಟ್ ತಡೆಗೋಡೆ (Protection Wall) ನಿರ್ಮಿಸುವ ಕಾಮಗಾರಿಯ ರೂ.28.20 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

******

**ಓದಲಾಗಿದೆ:**

1 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರ ಪತ್ರ ಸಂಖ್ಯೆ: ಕನೀನಿ/ಹಿಪ್ಪರಗಿ ಬ್ಯಾರೇಜ್/2019-20/4905 ದಿ:10/11.12.2019

2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರ ಪತ್ರ ಸಂಖ್ಯೆ: ಕನೀನಿ/ಹಿಪ್ಪರಗಿ ಬ್ಯಾರೇಜ್/2019-20/3991 ದಿ:12.11.2020.

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರ ಪತ್ರ ಸಂಖ್ಯೆ: ಕನೀನಿ/ಹಿಪ್ಪರಗಿ ಬ್ಯಾರೇಜ್/2019-20/7304 ದಿ:26.02.2021/ 03.03.2021.

**ಪ್ರಸ್ತಾವನೆ:**

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರು ಮೇಲೆ ಓದಲಾದ (1), (2) ಮತ್ತು (3) ರ ಪತ್ರಗಳಲ್ಲಿ ಹಿಪ್ಪರಗಿ ಬ್ಯಾರೇಜಿನ ಎಡಭಾಗದ ತಿರುವಿನಲ್ಲಿ ಕಾಂಕ್ರೀಟ್ ತಡೆಗೋಡೆ (Protection Wall) ನಿರ್ಮಿಸುವ ಕಾಮಗಾರಿಯ ರೂ.28.20 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ

ಸದರಿ ಯೋಜನೆಯಡಿ ಮಳೆಗಾಲದಲ್ಲಿ ಹಿಪ್ಪರಗಿ ಬ್ಯಾರೇಜಿನಿಂದ ನೀರನ್ನು ಹೊರಬಿಟ್ಟಾಗಬ್ಯಾರೇಜಿನ ಗೇಟ್ ಮೂಲಕ ರಭಸವಾಗಿ ಹರಿಯುವ ನೀರಿನಿಂದ ಎಡಭಾಗದ ತಿರುವಿನಲ್ಲಿ ಎರೆಮಣ್ಣು ಸವಕಳಿಯಾಗಿ ಸಂಪೂರ್ಣ ನದಿ ದಂಡೆಯಲ್ಲಿ ಕೊರೆತ ಉಂಟಾಗುತ್ತಿದ್ದು, ಗಣನೀಯ ಪ್ರಮಾಣದಲ್ಲಿ ರೈತರ ಭೂಮಿಗೆ ನೀರು ನುಗ್ಗಿ ನಷ್ಟ ಉಂಟಾಗುತ್ತಿರುತ್ತದೆ. ಕೇಂದ್ರ ಜಲ ಆಯೋಗವು 2007 ರಲ್ಲಿ ಬ್ಯಾರೇಜ್ ತಪಾಸಣೆಯ ಸಮಯದಲ್ಲಿ ಕೃಷ್ಣಾ ನದಿಯ ಎಡದಂಡೆಯಲ್ಲಿ 500 ಮೀಟರ್ ಉದ್ದದ ಕಾಂಕ್ರೀಟ್ ತಡೆಗೋಡೆ ನಿರ್ಮಿಸುವದರಿಂದ ಎಡ ದಂಡೆಯ ಸವೆತವನ್ನು ತಡೆಯಬಹುದು ಎಂದು ಸೂಚಿಸಿರುತ್ತಾರೆ. ದಿನಾಂಕ 20.10.2012 ರಂದು ಜರುಗಿದ 142 ನೇ ತಾಂತ್ರಿಕ ಉಪ ಸಮಿತಿಯ ಸಭೆಯಲ್ಲಿ ಗುರುತ್ವಾಕರ್ಷಣೆಯುಳ್ಳ 200 ಮೀ ಉದ್ದದ ತಡೆಗೋಡೆಯ ನಿರ್ಮಾಣದ ಕಾಮಗಾರಿಯ ಅಂದಾಜುಪಟ್ಟಿಗೆ ಅನುಮೋದನೆ ನೀಡುವಂತೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ತಾಂತ್ರಿಕ ಉಪ ಸಮಿತಿಯ ಸಭೆಯ ನಡವಳಿಯಲ್ಲಿ ಹಾನಿ ಸಂಭವಿಸುವ ಕಾರಣಗಳನ್ನು ತನಿಖೆ ಮಾಡಲು ಮತ್ತು ಹಾನಿ ಮರುಕಳಿಸಲಾರದಂತ ಪರಿಹಾರ ಕ್ರಮಗಳನ್ನು ತೆಗೆದುಕೊಳ್ಳುವಂತೆ ಸೂಚಿಸಲಾಗಿರುತ್ತದೆ. ಪ್ರತಿ ವರ್ಷ ನದಿ ದಂಡೆಯ ಸವೆತದಿಂದ, ಭಾರೀ ಪ್ರಮಾಣದ ಹೂಳು ತುಂಬಿಕೊಳ್ಳುತ್ತಿರುತ್ತದೆ. ಇದಕ್ಕೆ ಪರಿಹಾರ ಕ್ರಮವಾಗಿ CWPRS, ಪುಣೆ ರವರು ತಡೆಗೋಡೆ ನಿರ್ಮಿಸಲು ನೀಡಿರುವ ಸಲಹೆಯಂತೆ, ಸುಮಾರು 500.00 ಮೀ. ಉದ್ದದ ಮತ್ತು 15.ಮೀ ಎತ್ತರದ ಕಾಂಕ್ರೀಟ್ ತಡೆಗೋಡೆ ನಿರ್ಮಿಸಲು ಯೋಜಿಸಲಾಗಿದೆ.

ಹಿಪ್ಪರಗಿ ಬ್ಯಾರೇಜಿನ ಎಡಭಾಗದ ತಿರುವಿನಲ್ಲಿ ಕಾಂಕ್ರೀಟ್ ತಡೆಗೋಡೆ ನಿರ್ಮಿಸುವ ಕಾಮಗಾರಿಯನ್ನು ಶ್ರೀಘವಾಗಿ ಕೈಗೆತ್ತಿಗೊಳ್ಳಲು ಹಾಗೂ ಈ ಕಾಮಗಾರಿಯನ್ನು ಕೈಗೊಳ್ಳುವುದರಿಂದ ಹಿಪ್ಪರಗಿ ಅಣೆಕಟ್ಟಿನ ಕೆಳಭಾಗದ ಎಡಭಾಗದ ತಿರುವಿನಲ್ಲಿ ಬರುವ ರೈತರ ಜಮೀನುಗಳು ನೀರಿನ ರಭಸದ ಕೊರೆತದಿಂದ ರಕ್ಷಣೆಗೊಂಡು ಬೆಳೆ ಉತ್ಪಾದನಾ ಪ್ರಮಾಣದಲ್ಲಿ ಹೆಚ್ಚಿಗೆ ಆಗುವ ಸಾಧ್ಯತೆ ಇದ್ದು, ರೈತರಿಗೆ ಎಲ್ಲಾ ರೀತಿಯಿಂದ ಸದುಪಯೋಗ ವಾಗುತ್ತದೆಯೆಂದು ತಿಳಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ದಿನಾಂಕ: 16.10.2019ರಂದು ಜರುಗಿದ 61ನೇ ನಿಗಮದ ಅಂದಾಜು ಪರಿಶೀಲನಾ ಸಮಿತಿ ಸಭೆಯಲ್ಲಿ ಮಂಡಿಸಲಾಗಿ, ಸದರಿ ಸಮಿತಿಯು ಹಿಪ್ಪರಗಿ ಬ್ಯಾರೇಜಿನ ಕೆಳಭಾಗದಲ್ಲಿ ಕೃಷ್ಣಾ ನದಿಯ ಎಡದಂಡೆಯಲ್ಲಿ ತಡೆಗೋಡೆ ನಿರ್ಮಿಸಲು ಶಿಫಾರಸ್ಸು ಮಾಡಿರುತ್ತದೆ ಹಾಗೂ ನಿಗಮದ ನಿರ್ದೇಶಕರ ಮಂಡಳಿಯಿಂದ ಅನುಮತಿ ಪಡೆಯಲು ಅಂದಾಜು ಪರಿಶೀಲನಾ ಸಮಿತಿ ಸೂಚಿಸಿರುವುದಾಗಿ , ಅದರನ್ವಯ ದಿನಾಂಕ: 04.12.2019 ರಂದು ನಡೆದ 92 ನೇ ನಿಗಮದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿರುತ್ತದೆ ಎಂದು ವರದಿಸಿರುತ್ತಾರೆ.

ಹಿಪ್ಪರಗಿ ಬ್ಯಾರೇಜ್‌ನ ಕೆಳಭಾಗದಲ್ಲಿ, ನದಿ ಬಲಭಾಗಕ್ಕೆ ತಿರುಗುತ್ತದೆ ಮತ್ತು ಸುಮಾರು 500 ಮೀ ದೂರದವರೆಗೆ ಹರಿದು, ಎಡದಂಡೆಯಲ್ಲಿ ಆಳವಾಗಿ ಹರಿಯುತ್ತದೆ. ಮಳೆಗಾಲದಲ್ಲಿ ಹಿಪ್ಪರಗಿ ಬ್ಯಾರೇಜಿನಿಂದ ನೀರನ್ನು ಹೊರಬಿಟ್ಟಾಗ, ಬ್ಯಾರೇಜಿನ ಗೇಟ್ ಮೂಲಕ ರಭಸವಾಗಿ ಹರಿಯುವ ನೀರಿನಿಂದ ಎಡಭಾಗದ ತಿರುವಿನಲ್ಲಿ ಎರೆಮಣ್ಣು ಸವಕಳಿಯಾಗಿ ಸಂಪೂರ್ಣ ನದಿ ದಂಡೆಯಲ್ಲಿ ಕೊರೆತ ಉಂಟಾಗುತ್ತಿದ್ದು, ಗಣನೀಯ ಪ್ರಮಾಣದಲ್ಲಿ ರೈತರ ಭೂಮಿಗೆ ನೀರು ನುಗ್ಗಿ ನಷ್ಟ ಉಂಟಾಗುತ್ತಿರುತ್ತದೆ. ಬ್ಯಾರೇಜ್ ನ ಕೆಳಭಾಗದ ಎಡದಂಡೆಯಲ್ಲಿ ಈಗಾಗಲೇ ಫಲವತ್ತಾದ ಕೃಷಿ ಭೂಮಿಯ ಗಣನೀಯ ಪ್ರದೇಶವು ಸವೆದುಹೋಗಿರುತ್ತದೆ. ಇದಕ್ಕೆ ಪರಿಹಾರ ಕ್ರಮವಾಗಿ CWPRS, ಪುಣೆ ರವರು 500.00 ಮೀ. ಉದ್ದಕ್ಕೆ ಮತ್ತು 15.ಮೀ ಎತ್ತರದ ಕಾಂಕ್ರೀಟ್ ತಡೆಗೋಡೆ ನಿರ್ಮಿಸಲು ಸಲಹೆ ನೀಡಿರುತ್ತಾರೆ. ಇದರಿಂದಾಗಿ ರೈತರ ಭೂಮಿಗೆ ಹರಿಯುವ ನೀರಿನ ರಭಸವು ನಿಯಂತ್ರಣಕ್ಕೆ ಬಂದು, ಭೂಮಿ ಕೊರೆತವನ್ನು ತಡೆದು ರೈತರಿಗೆ ನಷ್ಟವು ಕಡಿಮೆ ಆಗುತ್ತದೆ. CWPRS, ಪುಣೆ ಮತ್ತು ನಿಗಮದ ನಿರ್ದೇಶಕರ ಮಂಡಳಿಯ ಶಿಫಾರಸ್ಸಿನಂತೆ, ಕರ್ನಾಟಕ ನೀರಾವರಿ ನಿಗಮ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕರು ಸದರಿ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ. ಪ್ರಸ್ತುತ ಸನ್ನಿವೇಶದಲ್ಲಿ ತಜ್ಞರು ನೀಡಿರುವ ಸಲಹೆಯಂತೆ ಭೂನಷ್ಟವನ್ನು ತಡೆಯಲು ಕಾಂಕ್ರೀಟ್ ತಡೆಗೋಡೆ ನಿರ್ಮಿಸುವುದು ಸೂಕ್ತವಾಗಿರುತ್ತದೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಲಾಗಿದೆ

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 10 ಹಿಅಯೋ 2019, ಬೆಂಗಳೂರು,**
**ದಿನಾಂಕ: 22.10.2021.**

ಹಿಪ್ಪರಗಿ ಬ್ಯಾರೇಜಿನ ಎಡಭಾಗದ ತಿರುವಿನಲ್ಲಿ ಕಾಂಕ್ರೀಟ್ ತಡೆಗೋಡೆ (Protection Wall) ನಿರ್ಮಿಸುವ ಕಾಮಗಾರಿಯ ರೂ.28.20 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 22 ಆಕೋ-1/ 2020 (ಇ-ಆಫೀಸ್) ದಿನಾಂಕ:29.04.2021 ರಲ್ಲಿ ನೀಡಿರುವ ಸಹಮತಿ ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 19 ಎಂಸಿಎಂ 2021 ಪಿಪಿಡಿ ದಿನಾಂಕ:06.07.2021 ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ. ಜಯಚಂದ್ರರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-4)
ಜಲಸಂಪನ್ಮೂಲ ಇಲಾಖೆ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು ಇವರಿಗೆ ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಗೊಳಿಸುವಂತೆ ಹಾಗೂ ಪ್ರಕಟಿಸಿದ 100 ಪ್ರತಿಗಳನ್ನು ಇಲಾಖೆಗೆ ಕಳುಹಿಸಿಕೊಡುವಂತೆ ಕೋರಲಾಗಿದೆ.

ಪ್ರತಿಯನ್ನು:

1) ಮಹಾಲೇಖಪಾಲರು (ಎ & ಇ ) ಕರ್ನಾಟಕ, ಬೆಂಗಳೂರು.

2) ಮಹಾಲೇಖಪಾಲರು (ಇ & ಆರ್ ಎಸ್ ಎ ) ಕರ್ನಾಟಕ, ಬೆಂಗಳೂರು.

3) ಮಹಾಲೇಖಪಾಲರು (ಜಿ & ಎಸ್ ಎಸ್ ಎ ) ಕರ್ನಾಟಕ, ಬೆಂಗಳೂರು.

4) ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.

5) ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.

6) ಸರ್ಕಾರದ ಜಂಟಿ ಕಾರ್ಯದರ್ಶಿ, (ಸಚಿವ ಸಂಪುಟ ಶಾಖೆ), (ಸಚಿವ ಸಂಪುಟ ಸಂಖ್ಯೆ: ಸಿ:380/2021, ದಿನಾಂಕ:01.10.2021 ರ ಮೇರೆಗೆ)

7) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

8) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ವಿಧಾನಸೌಧ, ಬೆಂಗಳೂರು.

9) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.

10) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.

11) ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.

12) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.

13) ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ ನೀರಾವರಿ (ಉತ್ತರ) ಬೆಳಗಾವಿ.

14) ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು,

15) ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ ( ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.

16) ಸರ್ಕಾರದ ಉಪ ಕಾರ್ಯದರ್ಶಿ (ಕೆಬಿಜೆಎನ್), ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.

17) ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

18) ನಿರ್ದೇಶಕರು, ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು, 10 ಪ್ರತಿಗಳು.

19) ತಾಂತ್ರಿಕ ಸಹಾಯಕರು, ಜಲಸಂನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.

20) ಶಾಖಾ ರಕ್ಷಾ ಕಡತ/ ಹೆಚ್ಚಿನ ಪ್ರತಿ.